# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಡಾ:ಬಿ.ಆರ್.ಅಂಬೇಡ್ಕರ್ ರೈತ ಸೇವಾ ಅಗ್ರಿಕಲ್ಚರ್ ಡೆವಲಪ್‌ಮೆಂಟ್ ಇಂಡಸ್ಟ್ರೀಸ್ ಅಸೋಸಿಯೇಷನ್ (ರಿ) ಮೈಸೂರು ಇವರಿಗೆ ಅನುಪಯುಕ್ತ ವಸ್ತುಗಳ ವಿಲೇವಾರಿ ಮಾಡಲು ನೀಡಿರುವ ಆದೇಶವನ್ನು ರದ್ದುಪಡಿಸುವ ಬಗ್ಗೆ -ಆದೇಶ

**ಉಲ್ಲೇಖ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 477 ಜಿಪಅ 2017 ದಿನಾಂಕ: 11.01.2018
2. ಡಾ:ಬಿ.ಆರ್.ಅಂಬೇಡ್ಕರ್ ರೈತ ಸೇವಾ ಅಗ್ರಿಕಲ್ಚರ್ ಡೆವಲಪ್‌ಮೆಂಟ್ ಇಂಡಸ್ಟ್ರೀಸ್ ಅಸೋಸಿಯೇಷನ್(ರಿ) ಮೈಸೂರು ಇವರ ಪತ್ರ ದಿನಾಂಕ:02.07.2021
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 04 ಎಸ್ ಎಸ್ ಕೆ 2021 ದಿನಾಂಕ: 28.07.2021

**ಪ್ರಸ್ತಾವನೆ:-**

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಹಾಗೂ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಅಧೀನದಲ್ಲಿ ಬರುವ ವೃತ್ತ ಮತ್ತು ವಿಭಾಗ/ಉಪವಿಭಾಗ ಕಛೇರಿಗಳಲ್ಲಿರುವ ಹಳೆಯ ಅನುಪಯುಕ್ತ ಸಾಮಗ್ರಿಗಳನ್ನು ಹಾಗೂ ಯಂತ್ರೋಪಕರಣಗಳನ್ನು ವಿಲೇವಾರಿ ಮಾಡಲು ಡಾ:ಬಿ.ಆರ್.ಅಂಬೇಡ್ಕರ್ ರೈತ ಸೇವಾ ಅಗ್ರಿಕಲ್ಚರ್ ಡೆವಲಪ್‌ಮೆಂಟ್ ಇಂಡಸ್ಟ್ರೀಸ್ ಅಸೋಸಿಯೇಷನ್(ರಿ) ಮೈಸೂರು ಇವರಿಗೆ 2 ವರ್ಷಗಳ ಅವಧಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ(3) ರ ದಿನಾಂಕ:28.07.2021 ರ ಆದೇಶದಲ್ಲಿ ಅನುಮೋದನೆ ನೀಡಲಾಗಿತ್ತು. ಆದರೆ ಇಲಾಖೆಯ ಅಧೀನದಲ್ಲಿ ಬರುವ ಉಪ ವಿಭಾಗ/ವಿಭಾಗ ಕಚೇರಿಗಳಲ್ಲಿನ ಅನುಪಯುಕ್ತ ಸಾಮಗ್ರಿಗಳನ್ನು ಯಾವುದೇ ಒಂದು ಸಂಸ್ಥೆಗೆ ನೇರವಾಗಿ ನಿರ್ದಿಷ್ಟ ಮೊತ್ತಕ್ಕೆ ಮಾರಾಟ ಮಾಡಲು ಅನುಮತಿ ನೀಡಲು ಬದಲು ಅದನ್ನು ಇ-ಟೆಂಡರ್ ಮೂಲಕ ಮಾರಾಟ ಮಾಡುವುದು ಸೂಕ್ತವಾಗಿರುತ್ತದೆ. ಆದ್ದರಿಂದ ಡಾ:ಬಿ.ಆರ್.ಅಂಬೇಡ್ಕರ್ ರೈತ ಸೇವಾ ಅಗ್ರಿಕಲ್ಚರ್ ಇಂಡಸ್ಟ್ರೀಸ್ ಅಸೋಸಿಯೇಷನ್, ಮೈಸೂರು ಸಂಸ್ಥೆಗೆ ಈ ಸಂಬಂಧ ಅನುಮತಿ ನೀಡಿ ಹೊರಡಿಸಿರುವ ಸರ್ಕಾರದ ದಿನಾಂಕ:28.07.2021 ಆದೇಶವನ್ನು ತಕ್ಷಣದಿಂದ ಹಿಂಪಡೆಯಲು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 04 ಎಸ್ ಎಸ್ ಕೆ 2021, ಬೆಂಗಳೂರು, ದಿನಾಂಕ:20.01.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಇಲಾಖೆಗಳ ವೃತ್ತ ಮತ್ತು ವಿಭಾಗ/ ಉಪವಿಭಾಗ ಕಛೇರಿಗಳಲ್ಲಿರುವ ಹಳೆಯ ಅನುಪಯುಕ್ತ ಸಾಮಗ್ರಿಗಳನ್ನು ಹಾಗೂ ಯಂತ್ರೋಪಕರಣಗಳನ್ನು ವಿಲೇವಾರಿ ಮಾಡಲು ಡಾ:ಬಿ.ಆರ್.ಅಂಬೇಡ್ಕರ್ ರೈತ ಸೇವಾ ಅಗ್ರಿಕಲ್ಚರ್ ಡೆವಲಪ್‌ಮೆಂಟ್ ಇಂಡಸ್ಟ್ರೀಸ್ ಅಸೋಸಿಯೇಷನ್(ರಿ) ಮೈಸೂರು ಸಂಸ್ಥೆಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 04 ಎಸ್ ಎಸ್ ಕೆ 2021, ದಿನಾಂಕ:28.07.2021 ರಂದು ನೀಡಿದ ಆದೇಶವನ್ನು ರದ್ದುಪಡಿಸಿ ಆದೇಶಿಸಿದೆ.

ಮುಂದುವರೆದು ಇಂತಹ ಅನುಪಯುಕ್ತ ಸಾಮಗ್ರಿ ಮತ್ತು ಯಂತ್ರೋಪಕರಣಗಳನ್ನು ಚಾಲ್ತಿಯಲ್ಲಿರುವ ನಿಯಮಗಳ ಅನುಸಾರ ಇ-ಟೆಂಡರ್ ಮೂಲಕ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವಂತೆ ಸಹ ಈ ಮೂಲಕ ಸ್ಪಷ್ಟ ಪಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/1/22

**(ಕೆ. ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (ಲೆಕ್ಕಪತ್ರ 1 & 2)/ (ಆಡಿಟ್) ,ಕರ್ನಾಟಕ, ಬೆಂಗಳೂರು.

2. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ
3. ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
7. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಎಲ್ಲಾ ಕಾರ್ಯಪಾಲಕ ಇಂಜಿನಿಯರುಗಳು
8. ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗಗಳ ಎಲ್ಲಾ ಕಾರ್ಯಪಾಲಕ ಇಂಜಿನಿಯರುಗಳು
9. ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗಗಳ ಎಲ್ಲಾ ಸಹಾಯಕ ಕಾರ್ಯಪಾಲಕ ಇಂಜಿನಿಯರುಗಳು
10. ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ಉಪವಿಭಾಗಗಳ ಎಲ್ಲಾ ಸಹಾಯಕ ಕಾರ್ಯಪಾಲಕ ಇಂಜಿನಿಯರುಗಳು
11. ಡಾ:ಬಿ.ಆರ್.ಅಂಬೇಡ್ಕರ್ ರೈತ ಸೇವಾ ಅಗ್ರಿಕಲ್ಚರ್ ಡೆವಲಪ್‌ಮೆಂಟ್ ಇಂಡಸ್ಟ್ರೀಸ್ ಅಸೋಸಿಯೇಷನ್(ರಿ), ಮೈಸೂರು
12. ರಾಜ್ಯ ಖಜನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ-1) / ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
14. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು. ಹೆಚ್ಚುವರಿ ಪ್ರತಿ / ರಕ್ಷಾ ಕಡತ.